ಇ) *ಸಕ್ರಮಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?*

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ)	*ನಮೂನೆ 50 ರಲ್ಲಿ 19-9-91ಕ್ಕೆ ಅಂತ್ಯಗೊಂಡಂತೆ :*	*ನಮೂನೆ 53ರಲ್ಲಿ 30-4-99ಕ್ಕೆ ಅಂತ್ಯಗೊಂಡಂತೆ*
	10,89,340	10,58,143
ಆ)	1,798	4,521

ಇ) ಅರ್ಜಿಗಳನ್ನು ವಿಲೇ ಮಾಡಲು ಹೊಸ ಸಕ್ರಮೀಕರಣ ಸಮಿತಿಗಳನ್ನು ರಚಿಸಲಾಗುತ್ತಿದೆ.

ಅಂಗನವಾಡಿ ಕಾರ್ಯಕರ್ತೆಯರ ಖಾಯಂಗೊಳಿಸುವ ಬಗ್ಗೆ

484 - ಶ್ರೀ. ಸಿ. ಚಿನ್ನಿಗಪ್ಪ (ಕೊರಟಗೆರೆ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಈ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುವವರ ಸಂಖ್ಯೆ ಎಷ್ಟು?

ಇ) ಇವರನ್ನು ಖಾಯಂಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಈ) ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿಗೆ ಮಂಜೂರಾದ ಹೊಸ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಪ್ರಸ್ತುತ ರಾಜ್ಯಕ್ಕೆ 40170 ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ.

ಆ) ಈ ಕೇಂದ್ರಗಳಲ್ಲಿ 3940 ಅಂಗನವಾಡಿ ಕಾರ್ಯಕರ್ತೆಯರು ಮತ್ತು 39921 ಸಹಾಯಕಿಯರು ಕಾರ್ಯನಿರ್ವಹಿಸುತ್ತಿದ್ದಾರೆ.

ಇ) ಭಾರತ ಸರ್ಕಾರದ ಮಾರ್ಗಸೂಚಿಗಳಂತೆ ಅಂಗನವಾಡಿ ಕಾರ್ಯಕರ್ತೆಯರು ಗೌರವಧನ ಆಧಾರಿತ ಕಾರ್ಯಕರ್ತೆಯರಾಗಿರುತ್ತಾರೆ.

ಈ) 1994-95ರಲ್ಲಿ ಕೊರಟಗೆರೆ ಯೋಜನೆಗೆ ಸರ್ಕಾರವು 25 ಹೆಚ್ಚುವರಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಿದೆ.